**ಕರ್ನಾಟಕ ಸರ್ಕಾರ**

**<u>ತಾಂತ್ರಿಕ ಶಿಕ್ಷಣ ಇಲಾಖೆ</u>**

ಸಂಖ್ಯೆ: ಬಿಟಿಇ/03/ಇಸಿಎಸ್(2)/2017

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-01,
ದಿನಾಂಕ:22-07-2017

**<u>ಸುತ್ತೋಲೆ</u>**

ವಿಷಯ: ಪರೀಕ್ಷಾ ಕೊಠಡಿಗಳಲ್ಲಿ ಸಿಸಿ ಕ್ಯಾಮರ ಅಳವಡಿಸುವ ಕುರಿತು
ಉಲ್ಲೇಖ:1.ತಾಂತ್ರಿಕ ಪರೀಕ್ಷಾ ಮಂಡಳಿಯ 166ನೇ ಕೇಂದ್ರ ಸಭೆಯ ನಿರ್ಣಯ ದಿ:19-06-2017
2.ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/03/ಇಸಿಎಸ್(2)/2017 ದಿ:27-06-2017

**************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಡಿಪ್ಲೋಮ ಪರೀಕ್ಷೆಗಳಲ್ಲಿ ಶಿಸ್ತು /ಪಾರದರ್ಶಕತೆ ತರುವ ಹಾಗೂ ಮಾಲ್‌ಪ್ರಾಕ್ಟೀಸ್ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಉಲ್ಲೇಖ (1)ರ ತಾಂತ್ರಿಕ ಪರೀಕ್ಷಾ ಮಂಡಳಿಯ 166 ಕೇಂದ್ರ ಸಭೆಯ ನಿರ್ಣಯದಂತೆ ಪರೀಕ್ಷಾ ಕೊಠಡಿಗಳಲ್ಲಿ ಸಿಸಿ ಕ್ಯಾಮರಗಳನ್ನು ದಿನಾಂಕ:30-07-2017 ರೊಳಗೆ ಅಳವಡಿಸಿ ಆ ಕುರಿತು ಮಂಡಳಿಗೆ ಮಾಹಿತಿ ನೀಡುವಂತೆ ಉಲ್ಲೇಖ (2)ರ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು.

ಮುಂದುವರೆದು, ಸಂಸ್ಥೆಗಳಲ್ಲಿ ಐಪಿ ಆಧಾರಿತ ಕ್ಯಾಮರಾಗಳನ್ನು ಎಲ್ಲಾ ಪರೀಕ್ಷಾ ಕೊಠಡಿಗಳಲ್ಲಿ ಮತ್ತು ಪ್ರಶ್ನೆಪತ್ರಿಕೆ ಸಂಗ್ರಹಣಾ ಕೊಠಡಿಗಳಲ್ಲಿ ತೃಪ್ತಿಕರವಾಗಿ ಅಳವಡಿಸಿರುವುದನ್ನು ಪರಿಶೀಲಿಸಿ ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿರುವುದನ್ನು ಖಾತರಿಪಡಿಸಿಕೊಂಡು ಮಂಡಳಿಗೆ ವರದಿ ನೀಡಲು ಆಯಾ ಸಂಸ್ಥೆಗಳಿಗೆ ಸಂಬಂಧಪಟ್ಟ ನೋಡಲ್ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳು ದಿನಾಂಕ:07-08-2017ರೊಳಗೆ ಭೇಟಿ ನೀಡುವರು. ಪ್ರಯುಕ್ತ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳು ಈಗಾಗಲೇ ಸೂಚಿಸಿರುವಂತೆ ಸಿಸಿ ಕ್ಯಾಮರಗಳನ್ನು ಅಳವಡಿಸಲು ಅಗತ್ಯ ಕ್ರಮಕೈಗೊಳ್ಳಲು ಮತ್ತೊಮ್ಮೆ ಸೂಚಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ

ಪ್ರತಿ: 1) ರಾಜ್ಯದ ಎಲ್ಲಾ ನೋಡಲ್ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ –ಮಾಹಿತಿಗಾಗಿ
2) ಇ- ಆಡಳಿತ –ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
3) ಗಣಕ ಕೇಂದ್ರ – ವೆಬ್‌ಪೋರ್ಟಲ್ ನಲ್ಲಿ ಪ್ರಕಟಿಸಲು
4) ಕಾರ್ಯದರ್ಶಿಯವರ ಆಪ್ತ ಶಾಖೆ